ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ : 130 (625)

ಸದಸ್ಯರ ಹೆಸರು : ಶ್ರೀ ಆರ್.ಪ್ರಸನ್ನ ಕುಮಾರ್

ಉತ್ತರಿಸಬೇಕಾದ ಸಚಿವರು : ಮಾನ್ಯ ಉಪ ಮುಖ್ಯಮಂತ್ರಿ, ಸಾರಿಗೆ ಸಚಿವರು

ಉತ್ತರಿಸಬೇಕಾಗಿದ್ದ ದಿನಾಂಕ : 25-07-2019

ಕ್ರಮ ಸಂಖ್ಯೆ	ಪ್ರಶ್ನೆ	ಉತ್ತರ
(ಅ)	ರಾಜ್ಯದಲ್ಲಿನ ಜಿಲ್ಲಾ ಪ್ರಾದೇಶಿಕ ಸಾರಿಗೆ ಕಛೇರಿಗಳಲ್ಲಿ ಖಾಲಿ ಇರುವ ಹುದ್ದೆಗಳೆಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)	ಸಾರಿಗೆ ಇಲಾಖೆಯಲ್ಲಿ ದಿನಾಂಕ:01-06-2019 ರಲ್ಲಿರುವಂತೆ ಪ್ರಾದೇಶಿಕ ಸಾರಿಗೆ ಕಛೇರಿಗಳಲ್ಲಿ ಜಿಲ್ಲಾವಾರು ಖಾಲಿ ಇರುವ ಹುದ್ದೆಗಳ ವಿವರವನ್ನು ಅನುಬಂಧ-1ರಲ್ಲಿ ನೀಡಲಾಗಿದೆ.
(ಆ)	ರಾಜ್ಯದ ಎಲ್ಲಾ ಜಿಲ್ಲಾ ಪ್ರಾದೇಶಿಕ ಸಾರಿಗೆ ಕಛೇರಿಗಳಲ್ಲಿ ಸಾರ್ವಜನಿಕರಿಗೆ ಕುಡಿಯುವ ನೀರು, ಶೌಚಾಲಯ ವ್ಯವಸ್ಥೆ ಇದೆಯೇ; ಇಲ್ಲದಿರುವ ಜಿಲ್ಲಾಗಳಾವುವು; (ವಿವರ ನೀಡುವುದು)	ರಾಜ್ಯದ ಎಲ್ಲಾ ಜಿಲ್ಲಾ ಪ್ರಾದೇಶಿಕ ಸಾರಿಗೆ ಅಧಿಕಾರಿಗಳ ಕಛೇರಿಗಳಲ್ಲಿ ಸಾರ್ವಜನಿಕರಿಗೆ ಕುಡಿಯುವ ನೀರು ಮತ್ತು ಶೌಚಾಲಯದ ವ್ಯವಸ್ಥೆಯನ್ನು ಒದಗಿಸಲಾಗಿದೆ.
(ಇ)	ಶಿವಮೊಗ್ಗ ಜಿಲ್ಲೆಯ ಜಿಲ್ಲಾ ಪ್ರಾದೇಶಿಕ ಸಾರಿಗೆ ಕಛೇರಿಗಳಲ್ಲಿ ದಿನಂಪ್ರತಿ ಬರುವ ಸಾರ್ವಜನಿಕರಿಗೆ ಕುಡಿಯುವ ನೀರು, ಶೌಚಾಲಯ ವ್ಯವಸ್ಥೆ ಸರಿಯಾಗಿ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ;	ಶಿವಮೊಗ್ಗ ಜಿಲ್ಲೆಯ ಜಿಲ್ಲಾ ಪ್ರಾದೇಶಿಕ ಸಾರಿಗೆ ಕಛೇರಿಗೆ ಪ್ರತಿನಿತ್ಯ ಬರುವ ಸಾರ್ವಜನಿಕರಿಗೆ ಕುಡಿಯುವ ನೀರು ಮತ್ತು ಶೌಚಾಲಯದ ವ್ಯವಸ್ಥೆ ಸರಿಯಾಗಿರುತ್ತದೆ.
ಈ)	ಇಂತಹ ಸೌಲಭ್ಯಗಳನ್ನು ಒದಗಿಸಲು ಎಲ್ಲಾ ಜಿಲ್ಲಾ ಸಾರಿಗೆ ಕಛೇರಿಗಳಿಗೆ ಪ್ರಸ್ತುತ ಸಾಲಿನಲ್ಲಿ ಬಿಡುಗಡೆ ಮಾಡಲಾದ ಅನುದಾನವೆಷ್ಟು; (ವಿವರ ನೀಡುವುದು)	ನೀರು ಮತ್ತು ಶೌಚಾಲಯ ವ್ಯವಸ್ಥೆಗಾಗಿ ವಿಶೇಷ ಅನುದಾನ ಒದಗಿಸಿರುವುದಿಲ್ಲ. ಸಾಮಾನ್ಯ ವೆಚ್ಚಗಳ ಅಡಿಯಲ್ಲಿ ಒದಗಿಸಿರುವ ಅನುದಾನದಿಂದ ಮೂಲಭೂತ ಸೌಕರ್ಯಗಳನ್ನು ಒದಗಿಸಲಾಗುವುದು.
ಉ)	ಶಿವಮೊಗ್ಗ ಜಿಲ್ಲಾ ಪ್ರಾದೇಶಿಕ ಅಧಿಕಾರಿ ಸ್ಥಾನ ಖಾಲಿ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಖಾಲಿ ಇದ್ದಲ್ಲಿ, ಅದನ್ನು ತುಂಬಲು ಕೈಗೊಂಡ ಕ್ರಮವೇನು?	ಶಿವಮೊಗ್ಗ ಕಛೇರಿಯಲ್ಲಿ ಖಾಲಿ ಇದ್ದ ಪ್ರಾದೇಶಿಕ ಸಾರಿಗೆ ಅಧಿಕಾರಿ ಹುದ್ದೆಯನ್ನು ತುಂಬಲಾಗಿದೆ.

ಟಿಡಿ 15 ಟಿಡಿಕ್ಯೂ 2019

(ಲಕ್ಷ್ಮಣ್ ಸಂಗಪ್ಪ ಸವದಿ)
ಉಪ ಮುಖ್ಯಮಂತ್ರಿ ಹಾಗೂ ಸಾರಿಗೆ ಸಚಿವರು.